**All India Radio: Bangalore**
**Regional Bulletin In Kannada**
**16.05.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**16.05.2026 / 2.30 p.m.**
**<><><><>**

ಮುಖ್ಯಾಂಶಗಳು

1. ಹೊಸ ದಾಖಲೆ ಬರೆದ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ - ೪೦ ಕೋಟಿ ದಾಟಿದ ಪ್ರಯಾಣಿಕರ ಸಂಖ್ಯೆ
2. ಲಕ್ಕುಂಡಿಯನ್ನು ಜಾಗತಿಕ, ಪಾರಂಪರಿಕ ತಾಣವನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ನಿರ್ಧಾರ
3. ಬೆಳಗಾವಿಯಲ್ಲಿ ೪ ಸಾವಿರದ ೫೦೦ ಕೋಟಿ ರೂಪಾಯಿ ವಂಚನೆ ಪ್ರಕರಣ ; ಆರೋಪಿ ಶಿವಾನಂದ ನೀಲಣ್ಣನವರ್ ಬಂಧನ
4. ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಮುಂದಿನ ಎರಡು ದಿನಗಳ ಕಾಲ ಭಾರೀ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ

<><><><>

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ೨೦೨೫-೨೬ನೇ ಹಣಕಾಸು ವರ್ಷದಲ್ಲಿ ಹೊಸ ದಾಖಲೆ ಬರೆದಿದೆ. ಪ್ರಯಾಣಿಕರ ಸಂಚಾರ ಮತ್ತು ಸರಕು ಸಾಗಾಣೆಯಲ್ಲಿ ಮೈಲಿಗಲ್ಲು ಸಾಧಿಸಿದೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೂಲಕ ಈವರೆಗೆ ೪೦ ಕೋಟಿ ಪ್ರಯಾಣಿಕರು ಪ್ರಯಾಣಿಸಿದ್ದು, ಐದು ಲಕ್ಷದ ೩೨ ಸಾವಿರ ಮೆಟ್ರಿಕ್ ಟನ್ ಸರಕುಗಳನ್ನು ಸಾಗಿಸಲಾಗಿದೆ. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅಧ್ಯಕ್ಷತೆಯಲ್ಲಿ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತ ಬಿಐಎಎಲ್‌ನ ೧೩೪ನೇ ಮಂಡಳಿ ಸಭೆಯಲ್ಲಿ ಪ್ರಸಕ್ತ ಹಣಕಾಸು ವರ್ಷದಲ್ಲಿ ಕೆಐಎಎಲ್ ಕೈಗೊಂಡ ಪ್ರಮುಖ ಸಾಧನೆಗಳು ಕಾರ್ಯಕ್ಷಮತೆಯ ಮುಖ್ಯಾಂಶಗಳು ಮತ್ತು ಅಭಿವೃದ್ಧಿ ಉಪಕ್ರಮಗಳ ಪರಿಶೀಲನೆ ವೇಳೆ ಮಂಡಳಿ ಈ ವಿಷಯ ತಿಳಿಸಿದೆ. ಒಂದೇ ದಿನದಲ್ಲಿ ೧ ಲಕ್ಷದ ೩೯ ಸಾವಿರದ ೧೧೧

ಪ್ರಯಾಣಿಕರನ್ನು ನಿರ್ವಹಿಸಲಾಗಿದೆ. ವರ್ಷದಲ್ಲಿ ೨ ಲಕ್ಷದ ೮೦ ಸಾವಿರದ ೮೦೦ ವಿಮಾನಗಳ ಸಂಚಾರವು ದಾಖಲಾಗಿದೆ.

<><><><>

ಲಕ್ಕುಂಡಿಯನ್ನು ಜಾಗತಿಕ, ಪಾರಂಪರಿಕ ತಾಣವನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ನಿರ್ಧರಿಸಿದೆ. ಬೆಂಗಳೂರಿನಲ್ಲಿ ಇಂದು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಕಳೆದ ಒಂದು ವರ್ಷದಲ್ಲಿ ಲಕ್ಕುಂಡಿಯಲ್ಲಿ ಮೂರು ಸಾವಿರ ಪ್ರಾಚ್ಯಾವಶೇಷಗಳನ್ನು ಸಂಗ್ರಹಿಸಲಾಗಿದೆ. ಈ ಮೂಲಕ ಲಕ್ಕುಂಡಿ ಗತವೈಭವವನ್ನು ಮರಳಿಸುವ ಸರ್ಕಾರದ ಕ್ರಮವನ್ನು ಜನಾಂದೋಲನವನ್ನಾಗಿ ಪರಿವರ್ತಿಸಲಾಗಿದೆ. ೧೬ ಲಕ್ಕುಂಡಿಯ ದೇವಾಲಯಗಳನ್ನು ಸಂರಕ್ಷಿತ ಸ್ಮಾರಕಗಳೆಂದು ಘೋಷಿಸಲಾಗಿದೆ. ಮುಂಬರುವ ದಿನಗಳಲ್ಲಿ ೧೦೦ ಬಾವಿಗಳು ಮತ್ತು ೧೦೦ ಪುರಾತನ ದೇವಾಲಯಗಳನ್ನು ಅನಾವರಣಗೊಳಿಸಲು ಸರ್ಕಾರ ನಿರ್ಧರಿಸಿದೆ. ನವದೆಹಲಿಯ ರಾಷ್ಟ್ರೀಯ ಪ್ರಾಚ್ಯವಸ್ತು ಸಂಗ್ರಹಾಲಯದಲ್ಲಿರುವ ೫೦ ವರ್ಷಗಳ ಹಿಂದೆ ಲಕ್ಕುಂಡಿಯಿಂದ ತೆಗೆದುಕೊಂಡು ಹೋಗಿರುವ ಪ್ರಾಚ್ಯಾವಶೇಷಗಳನ್ನು ಮರಳಿ ಲಕ್ಕುಂಡಿಗೆ ತರಲು ಕ್ರಮ ವಹಿಸಲು ನಿರ್ಧರಿಸಲಾಗಿದೆ.

<><><><>

ಸಾಮಾಜಿಕ ಕಾರ್ಯಕರ್ತ ಶಿವಾನಂದ ನೀಲಣ್ಣನವರ್ ವಿರುದ್ಧದ ೪ ಸಾವಿರದ ೫೦೦ ಕೋಟಿ ರೂಪಾಯಿ ವಂಚನೆ ಪ್ರಕರಣದ ತನಿಖೆಯನ್ನು ಬೆಳಗಾವಿ ಪೊಲೀಸರು ತೀವ್ರಗೊಳಿಸಿದ್ದಾರೆ. ಶಿವಬಸವ ನಗರದಲ್ಲಿರುವ ಅವರಿಗೆ ಸೇರಿದ ಎರಡು ಕಚೇರಿಗಳ ಮೇಲೆ ಪೊಲೀಸರು ದಾಳಿ ನಡೆಸಿ ಹಣಕಾಸು ವಹಿವಾಟು ಮತ್ತು ಸಾರ್ವಜನಿಕ ಹೂಡಿಕೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ಸಾರ್ವಜನಿಕರು ಮತ್ತು ಮಾಜಿ ಸೈನಿಕರು ಹೂಡಿಕೆ ಮಾಡಿದ ಸಾವಿರಾರು ಕೋಟಿ ರೂಪಾಯಿಗಳನ್ನು ದುರುಪಯೋಗಪಡಿಸಿಕೊಂಡ ಆರೋಪ ಶಿವಾನಂದ ನೀಲಣ್ಣನವರ್ ಮೇಲಿದೆ. ಬೆಳಗಾವಿ ಆಯುಕ್ತ ಮೊಹಮ್ಮದ್ ರೋಶನ್ ಠೇವಣಿದಾರರ ಹಿತಾಸಕ್ತಿ ರಕ್ಷಣಾ ಕಾಯ್ದೆಯಡಿ ತನಿಖೆಗೆ ಆದೇಶಿಸಿದ್ದಾರೆ.

<><><><>

ಗೃಹಸಚಿವ ಡಾ.ಜಿ.ಪರಮೇಶ್ವರ್ ಅವರು, ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಇದೇ ೧೯ರಂದು ತುಮಕೂರಿನಲ್ಲಿ ನಡೆಯುವ ಪ್ರಗತಿಯತ್ತ ಕರ್ನಾಟಕ ಸಾರ್ಥಕ ಸೇವೆಯ ಸಮರ್ಪಣೆ ಸಮಾವೇಶಕ್ಕೆ ಆಹ್ವಾನ ನೀಡಿದ್ದಾರೆ. ಮುಖ್ಯಮಂತ್ರಿ ಕಾವೇರಿ ನಿವಾಸಕ್ಕೆ ಆಗಮಿಸಿದ ಅವರು, ಮೂರು ವರ್ಷದ ಸಾಧನಾ ಸೇವೆಯ ಸಮರ್ಪಣೆ ಕಾರ್ಯಕ್ರಮಕ್ಕೆ ಆಗಮಿಸುವಂತೆ ಮುಖ್ಯಮಂತ್ರಿಯವರಿಗೆ ಆಮಂತ್ರಣ ನೀಡಿದ್ದಾರೆ. ಇದಕ್ಕೂ ಮೊದಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿ ಕಾರ್ಯಕ್ರಮಕ್ಕೆ ಆಹ್ವಾನಿಸಿದರು.

<><><>

ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಚಾಮರಾಜನಗರ ಜಿಲ್ಲಾ ಕೇಂದ್ರದ ವಿವಿಧ ವಾರ್ಡ್‌ಗಳಿಗೆ ಇಂದು ಭೇಟಿ ನೀಡಿ ಕುಡಿಯುವ ನೀರಿನ ಪೂರೈಕೆ, ಸಮಸ್ಯೆ ಬಗ್ಗೆ ಪರಿಶೀಲನೆ ನಡೆಸಿದರು. ಸೋಮವಾರಪೇಟೆ, ಬೀಡಿ ಕಾಲೋನಿ, ಗಾಳಿಪುರ ಸೇರಿ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿ, ನೀರಿನ ಪೂರೈಕೆ ಬಗ್ಗೆ ನಿವಾಸಿಗಳಿಂದಲೇ ಮಾಹಿತಿ ಪಡೆದರು. ಅಗತ್ಯವಿದ್ದರೇ ಟ್ಯಾಂಕರ್ ನಲ್ಲಿ ನೀರು ಪೂರೈಸಿ, ಸಮಸ್ಯೆ ಕಂಡುಬಂದ ಕೂಡಲೇ ಪರಿಹರಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><>

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಧಾನಿ ನರೇಂದ್ರ ಮೋದಿ ಅವರ ಇಂಧನ ಉಳಿತಾಯ ಕರೆಯನ್ನು ಬೆಂಬಲಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಇಂದು ಬೆಂಗಳೂರಿನಲ್ಲಿ ನಡೆಯುವ ವಿವಿಧ ಕಾರ್ಯಕ್ರಮಗಳಿಗೆ ಮೆಟ್ರೋದಲ್ಲಿ ಪ್ರಯಾಣಿಸಿದ್ದಾರೆ. ಇದೇ ವೇಳೆ ಮಾತನಾಡಿದ ಅವರು, ಇಂಧನ ಸಂರಕ್ಷಣೆಯ ಕುರಿತು ಪ್ರಧಾನಿ ಕರೆಯನ್ನು ದೇಶದ ಎಲ್ಲಾ ನಾಗರಿಕರು ಅನುಸರಿಸಬೇಕು ಎಂದು ತಿಳಿಸಿದ್ದಾರೆ. ವಿರೋಧ ಪಕ್ಷಗಳು ಪ್ರಸ್ತುತ ಜಾಗತಿಕ, ಆರ್ಥಿಕ ಪರಿಸ್ಥಿತಿ ಮತ್ತು ಇಂಧನ ಸಂರಕ್ಷಣೆಗಾಗಿ ಪ್ರಧಾನಿ ಕರೆಯನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದ್ದಾರೆ.

<><><>

ಬಳ್ಳಾರಿಯಲ್ಲಿ ನಡೆಯುತ್ತಿರುವ ರೈಲ್ವೆ ಮೇಲ್ಸೇತುವೆ, ರೈಲು ನಿಲ್ದಾಣ ಮೇಲ್ದರ್ಜೆಗೇರಿಸುವುದು ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಹುಬ್ಬಳ್ಳಿ ನೈರುತ್ಯ ರೈಲ್ವೆ ವಲಯದ ಜನರಲ್ ಮ್ಯಾನೇಜರ್ ಪಿ. ಅನಂತ್ ಹಾಗೂ ಬಳ್ಳಾರಿ ಲೋಕಸಭಾ ಸದಸ್ಯ ಈ ತುಕಾರಾಂ ಇಂದು ಪರಿಶೀಲನೆ ನಡೆಸಿದರು. ಅಮೃತ್ ಭಾರತ್ ಯೋಜನೆಯಡಿ ಬಳ್ಳಾರಿ ರೈಲ್ವೆ ನಿಲ್ದಾಣದ

ಅಭಿವೃದ್ಧಿಗೆ ೧೭ ಕೋಟಿ ರೂಪಾಯಿ ೨೦೨೩ರಲ್ಲಿ ಮಂಜೂರಾಗಿದ್ದು ಕಳೆದ ಮೂರು ವರ್ಷಗಳಿಂದ ಕಾಮಗಾರಿ ಮಂದಗತಿಯಲ್ಲಿ ನಡೆಯುತ್ತಿದೆ. ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ಲೋಕಸಭಾ ಸದಸ್ಯ ಈ ತುಕಾರಾಂ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><><>

ಬಾಗಲಕೋಟೆ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ರೈಲ್ವೆ ಹಾಗೂ ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆ ಕುರಿತು ಸಂಸದ ಪಿ.ಸಿ.ಗದ್ದಿಗೌಡರ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ನೇತೃತ್ವದಲ್ಲಿ ಇಂದು ಸಭೆ ನಡೆಯಿತು. ಸಭೆಯಲ್ಲಿ, ಭಾರತೀಯ ರಾಷ್ಟ್ರೀಯ ಹೆದ್ದಾರಿ ಹಾಗೂ ರೇಲ್ವೆ ಯೋಜನೆಗಳಿಗೆ ಅಗತ್ಯವಿರುವ ಭೂಸ್ವಾಧೀನ, ಬಾಕಿ ಪ್ರಕರಣಗಳು ಹಾಗೂ ಕಾಮಗಾರಿಗಳ ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆಯಲಾಯಿತು. ಯೋಜನೆಗಳ ಅನುಷ್ಠಾನಕ್ಕೆ ಬೇಕಾಗಿರುವ ಭೂಸ್ವಾಧೀನ ಪ್ರಕ್ರಿಯೆಯನ್ನು ತ್ವರಿತಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು. ಸಭೆಯಲ್ಲಿ ಮಾತನಾಡಿದ ಪಿ.ಸಿ.ಗದ್ದಿಗೌಡರ, ಯೋಜನೆ ಅನುಷ್ಠಾನದಲ್ಲಿ ಕೆಲ ತೊಂದರೆಗಳು ಸಹಜವಾದರೂ ಅವುಗಳನ್ನು ಪರಿಹರಿಸಿಕೊಂಡು ಕಾಮಗಾರಿಗಳನ್ನು ಪೂರ್ಣಗೊಳಿಸುವಲ್ಲಿ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದ್ದಾರೆ. ಜವಾಬ್ದಾರಿಯುತವಾಗಿ ಕೆಲಸ ನಡೆಯದಿರುವುದರಿಂದ ಯೋಜನೆಗಳಲ್ಲಿ ವಿಳಂಬ ಉಂಟಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಯೋಜನೆ ಅನುಷ್ಠಾನದಲ್ಲಿ ನಿರ್ಲಕ್ಷ್ಯ ತೋರಿದರೆ ಸಹಿಸಲಾಗುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಕಂದಾಯ ದಾಖಲೆಗಳ ಡಿಜಿಟಲೀಕರಣ ಪ್ರಕ್ರಿಯೆಯಲ್ಲಿ ದಾವಣಗೆರೆ ತಾಲ್ಲೂಕು ರಾಜ್ಯಮಟ್ಟದಲ್ಲಿ ಎರಡನೇ ಸ್ಥಾನದಲ್ಲಿದೆ ಎಂದು ತಹಶೀಲ್ದಾರ್ ಅಶ್ವಥ್ ತಿಳಿಸಿದ್ದಾರೆ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾಹಿತಿ ನೀಡಿದ ಅವರು, ದಾಖಲೆಗಳ ಸ್ಕ್ಯಾನಿಂಗ್ ಮತ್ತು ಸಂಗ್ರಹಣೆಯಲ್ಲಿ ತಾಲ್ಲೂಕು ಈಗಾಗಲೇ ರಾಜ್ಯ ಮಟ್ಟದಲ್ಲಿ ಎರಡನೇ ಸ್ಥಾನದಲ್ಲಿದೆ. ತಾಲೂಕಿನ ಆಡಳಿತ ಯಂತ್ರವು ಮೊದಲ ಸ್ಥಾನ ತಲುಪಲು ವೇಗವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.

ಧ್ವನಿ : ತಹಶಿಲ್ದಾರ್ ಅಶ್ವಥ್

<><><><>

ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಅರಬಿಳಚಿ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಆದಿ ಕರ್ನಾಟಕ ಜನಾಂಗದ ಬೀದಿಗೆ ರಸ್ತೆ ಬಂದ್ ಮಾಡಿರುವುದನ್ನು ವಿರೋಧಿಸಿ ನಡೆಸುತ್ತಿರುವ ಪ್ರತಿಭಟನೆ ೧೦೩ ದಿನಗಳಿಗೆ ತಲುಪಿದೆ. ಅರಬಿಳುಚಿ ಗ್ರಾಮದಲ್ಲಿ ೬೦ಕ್ಕೂ ಹೆಚ್ಚು ಪರಿಶಿಷ್ಟರಿಗೆ ಸೇರಿದ ಮನೆಗಳಿದ್ದು ಆ ಮನೆಗಳಿಗಿದ್ದ, ರಸ್ತೆ ಸಂಪರ್ಕವನ್ನು ಈ ಹಿಂದೆ ಕಡಿತ ಮಾಡಲಾಗಿತ್ತು. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ಮುಂಭಾಗ ಪ್ರತಿಭಟನೆ ನಡೆಸಿದ ನಿವಾಸಿಗಳು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನ ಆಗಿರಲಿಲ್ಲ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳ ವಿರುದ್ಧ ಶಿವಮೊಗ್ಗ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ದಲಿತ ಸಂಘರ್ಷ ಸಮಿತಿ ನೇತೃತ್ವದಲ್ಲಿ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ. ಕೂಡಲೇ ೬೦ ಮನೆಗಳಿಗೆ ರಸ್ತೆ ಸಂಪರ್ಕ ಕಲ್ಪಿಸುವಂತೆ ಪ್ರತಿಭಟನಾಕಾರರು ಒತ್ತಾಯಿಸಿದರು.

<><><><>

ಇನ್ನು ಹವಾವರ್ತಮಾನ,

ಮುಂದಿನ ಎರಡು ದಿನಗಳಲ್ಲಿ ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಂಡ್ಯ, ಕೊಡಗು, ಚಿಕ್ಕಮಗಳೂರು, ಹಾಸನ, ಶಿವಮೊಗ್ಗ ಜಿಲ್ಲೆಗಳಲ್ಲಿ ಭಾರೀ ಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗಲಿದೆ. ಬೆಂಗಳೂರಿನ ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣವಿದ್ದು, ಹಲವೆಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡಿನ ರಾಯಚೂರು, ಯಾದಗಿರಿ, ಕೊಪ್ಪಳ ಸೇರಿದಂತೆ ಹಲವೆಡೆ ಬಿರುಗಾಳಿಯೊಂದಿಗೆ ಹಲವೆಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>